ಕರ್ನಾಟಕ ಸರ್ಕಾರ

# ಸಹಾಯಕ ನಿರ್ದೇಶಕರು ಗ್ರೇಡ್-1ರವರ ಕಛೇರಿ ಸಮಾಜ ಕಲ್ಯಾಣ ಇಲಾಖೆ

ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಕಟ್ಟಡದ ಪಕ್ಕ, ಬೆಂಗಳೂರು ಉತ್ತರ ತಾಲ್ಲೂಕು-560 064

ಫೋನ್: 080-28461351 ಟೆಲಿಫ್ಯಾಕ್ಸ್: 080-28461356 Email: tswdblr.north@gmail.com

ಸಂ:ಸನಿ/ಸಕಇ/ಬೆಂ(ಉ)/ವಿ.ವೇ/ಸಿಆರ್- /2023-24 ದಿನಾಂಕ:20/05/2024

ಡೀನ್/ರಿಜಿಸ್ಟ್ರಾರ್/ಪ್ರಾಂಶುಪಾಲರು

______________

______________

ಬೆಂಗಳೂರು

ಮಾನ್ಯರೇ,

ವಿಷಯ: 1ನೇ ಪಿ.ಯು.ಸಿ ಯಿಂದ ಉನ್ನತ ಶಿಕ್ಷಣಕ್ಕೆ ಸೇರುವ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ, ಪೋಷಕರಿಂದ ದಾಖಲಾತಿ ಸಮಯದಲ್ಲಿ ಶುಲ್ಕ ಪಡೆಯಬಾರುದು ಎಂಬ ಬಗ್ಗೆ.

ಉಲ್ಲೇಖ: 1. ಕರ್ನಾಟಕ ಸರ್ಕಾರದ ಸಚಿವಾಲಯ, ವಿಕಾಸ ಸೌಧ, ಬೆಂಗಳೂರು ರವರ ಸುತ್ತೋಲೆ ಸಂಖ್ಯೆ: ಸಕಇ 168 ಪಕವಿ 2020 ದಿನಾಂಕ: 12/11/2020

2. ಸಂ:ಜಂನಿಸಕಇ/ಬೆಂ(ನ)ಯೋ/ಸಿಆರ್-14/2023-24 ದಿನಾಂಕ 06/05/2024

*-*-*-*

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ರಾಜ್ಯದ ವಿವಿಧ ವಿಶ್ವವಿದ್ಯಾಲಯ/ಶಿಕ್ಷಣ ಸಂಸ್ಥೆಗಳಲ್ಲಿ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಪ್ರವೇಶಾತಿ ಸಮಯದಲ್ಲಿ ಮುಂಗಡವಾಗಿ ಶುಲ್ಕವನ್ನು ಪಾವತಿಸುವಂತೆ ಒತ್ತಾಯಿಸಬಾರದೆಂಬುದಾಗಿ ಮೇಲ್ಕಂಡ ಉಲ್ಲೇಖಿತ (1) ರ ಸುತ್ತೋಲೆಯಲ್ಲಿ ಸೂಚಿಸಲಾಗಿರುತ್ತದೆ. 2019-20 ನೇ ಸಾಲಿನಿಂದ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನವನ್ನು ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದಡಿ ಮಂಜೂರು ಮಾಡಲಾಗುತ್ತಿದ್ದು ಮಂಜೂರಾದ ವಿದ್ಯಾರ್ಥಿವೇತನ ಮೊತ್ತವು 2021-22 ನೇ ಸಾಲಿನಿಂದ ನೇರವಾಗಿ ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ಜಮಾ ಮಾಡಲು ಅವಕಾಶ ಕಲ್ಪಿಸಲಾಗಿರುತ್ತದೆ.

ಮುಂದುವರೆದು ಕೆಲವೊಂದು ತಾಂತ್ರಿಕ ಕಾರಣಗಳಿಂದಾಗಿ ವಿದ್ಯಾರ್ಥಿವೇತನವನ್ನು ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ಜಮಾ ಮಾಡುವುದು ವಿಳಂಬವಾಗಿರುತ್ತದೆ. ಇಂತಹ ಸಂದರ್ಭದಲ್ಲಿ ಕೆಲವು ಖಾಸಗಿ ಕಾಲೇಜು/ವಿಶ್ವ ವಿದ್ಯಾಲಯಗಳು ಹಾಗೂ ಶಿಕ್ಷಣ ಸಂಸ್ಥೆಗಳು ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಶುಲ್ಕವನ್ನು ಪಾವತಿಸುವಂತೆ ಒತ್ತಾಯಿಸುತ್ತಿರುವುದು ಕಂಡುಬಂದಿದ್ದು ವಿದ್ಯಾರ್ಥಿಗಳಿಂದ ಹಲವಾರು ಬಾರಿ ದೂರುಗಳು ಕೇಳಿಬಂದಿರುತ್ತದೆ. ಇದರಿಂದ ವಿದ್ಯಾರ್ಥಿಗಳ ಶೈಕ್ಷಣಿಕ ಚಟುವಟಿಕೆಗಳಿಗೆ ತೊಂದರೆಯುಂಟಾಗಿರುತ್ತದೆ.

ಭಾರತ ಸರ್ಕಾರದ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನವನ್ನು ಅರ್ಹರಿರುವ ಎಲ್ಲಾ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಮಂಜೂರು ಮಾಡುತ್ತಿರುವುದರಿಂದ ಪ್ರವೇಶಾತಿ ಸಂದರ್ಭದಲ್ಲಿ ಹಾಗೂ ವಿದ್ಯಾರ್ಥಿವೇತನ ಮೊತ್ತವು ಜಮೆಯಾಗುವುದು ವಿಳಂಬವಾದಲ್ಲಿ ವಿದ್ಯಾರ್ಥಿಗಳನ್ನು ಶುಲ್ಕ ಪಾವತಿಸುವಂತೆ ಒತ್ತಾಯಿಸಬಾರದೆಂಬುದಾಗಿ ಸೂಚಿಸುತ್ತಾ ಕರ್ನಾಟಕ ಸರ್ಕಾರದ ಸಚಿವಾಲಯ, ವಿಕಾಸ ಸೌಧ, ಬೆಂಗಳೂರು ರವರ ಸುತ್ತೋಲೆಯನ್ನು ಈ ಪತ್ರದೊಂದಿಗೆ ಲಗತ್ತಿಸಿ ಕಳುಹಿಸಲಾಗಿದೆ. ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಪಡೆಯಲು ನಿಗಧಿಪಡಿಸಿರುವ ಅರ್ಹತೆಗಳನ್ನು, ಮಂಜೂರಾತಿ /ಮರುಪಾವತಿ ಶುಲ್ಕಗಳ ವಿವರಗಳಿಗೆ ಸಂಬಂಧಿಸಿದಂತೆ ಸರ್ಕಾರವು ನಿಗಧಿ ಪಡಿಸಿರುವ ಕರ್ನಾಟಕ ಸರ್ಕಾರದ ನಡವಳಿಗಳ ಪ್ರತಿಯನ್ನು ಮುಂದಿನ ಕ್ರಮಕ್ಕಾಗಿ ಈ ಪತ್ರದೊಂದಿಗೆ ಲಗತ್ತಿಸಿ ಕಳುಹಿಸಲಾಗಿದೆ.

ತಮ್ಮ ವಿಶ್ವಾಸಿ

ಸಹಾಯಕ ನಿರ್ದೇಶಕರು, ಗ್ರೇಡ್-1

ಸಮಾಜ ಕಲ್ಯಾಣ ಇಲಾಖೆ

ಬೆಂಗಳೂರು ಉತ್ತರ ತಾಲ್ಲೂಕು, ಯಲಹಂಕ

Scanned with OKEN Scanner

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಮೆಟ್ರಿಕ್ ನಂತರದ ವಿದ್ಯಾರ್ಥಿಗಳ ಶುಲ್ಕ ಮಂಜೂರಾತಿ/ ಮರುಪಾವತಿ ಯೋಜನೆಯನ್ನು ಪರಿಷ್ಕರಿಸುವ ಬಗ್ಗೆ.

ಓದಲಾಗಿದೆ: 1. ಸರ್ಕಾರದ ಆದೇಶ ಸಂ:ಎಸ್‌ಡಬ್ಲ್ಯೂಎಲ್/229/ಬಿಸಿಎ/80 ದಿ:16.12.1982.

2. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ರವರ ಪ್ರಸ್ತಾವನೆ ಸಂ.ಸಕನಿ/ಇಡಿ 3/ಸಿಆರ್ 02/2015-16 ದಿನಾಂಕ 15.04.2015

*****

ಪ್ರಸ್ತಾವನೆ:

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಮೆಟ್ರಿಕ್ ನಂತರದ ವಿದ್ಯಾರ್ಥಿಗಳ ಶುಲ್ಕ ಮಂಜೂರಾತಿ/ ಮರುಪಾವತಿ ಯೋಜನೆಯ ನಿಯಮಗಳನ್ನು 1982 ರಲ್ಲಿ ಜಾರಿಗೆ ತಂದಿದ್ದು, ತದನಂತರ ಸಾಕಷ್ಟು ಬದಲಾವಣೆಗಳು ಆಗಿರುತ್ತವೆ. ಆದರೆ 1982ರ ಸರ್ಕಾರದ ಆದೇಶ ಹಾಗೇ ಮುಂದುವರಿಯುತ್ತಿದ್ದರೂ ಸಹ, ಬೇರೆ ಬೇರೆ ರೀತಿಯಲ್ಲಿ ಶುಲ್ಕ ಮಂಜೂರಾತಿ / ಮರುಪಾವತಿ ಮಾಡಲಾಗುತ್ತದೆ ಮತ್ತು ಇದರಿಂದ ಕೆಲವು ಸಮಸ್ಯೆಗಳು ಎದುರಾಗುತ್ತಿವೆ. ಸಮಾಜ ಕಲ್ಯಾಣ ಇಲಾಖೆಯಿಂದ ಭಾರತ ಸರ್ಕಾರ ನಿಯಮಗಳಂತೆ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ಶುಲ್ಕ ಮಂಜೂರಾತಿ / ಮರುಪಾವತಿ ನೀಡಲು ವಾರ್ಷಿಕ ವರಮಾನ ರೂ.2.50 ಲಕ್ಷಗಳನ್ನು ನಿಗದಿಪಡಿಸಲಾಗಿದೆ. ಆದರೆ ವೈದ್ಯಕೀಯ ಶಿಕ್ಷಣ ಇಲಾಖೆಯಿಂದ ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯಿಂದ ವಾರ್ಷಿಕ ಆದಾಯ ರೂ.2.50 ಲಕ್ಷಗಳ ಮೇಲ್ಪಟ್ಟವರಿಗೆ ಸಹ ಕೆಲವು ಕೋರ್ಸುಗಳಿಗೆ ಶುಲ್ಕ ಮರುಪಾವತಿ ಮಾಡಲಾಗುತ್ತಿದೆ. ಆದರೆ ಸಿ.ಇ.ಟಿ ಮುಖಾಂತರ ಪ್ರವೇಶ ಪಡೆದವರಿಗೆ ಮಾತ್ರ ಶುಲ್ಕ ಮರುಪಾವತಿ ಮಾಡಲಾಗುತ್ತಿದ್ದು, ಇತರ ವಿಧಾನ ಅಂದರೆ ಕಾಮೆಡ್-ಕೆ ಇತ್ಯಾದಿ ಮೂಲಕ ಪ್ರವೇಶ ಪಡೆದವರಿಗೆ ಈ ಸವಲತ್ತು ನೀಡಲಾಗುತ್ತಿಲ್ಲ.

ಈ ಹಿನ್ನೆಲೆಯಲ್ಲಿ 2015-16ನೇ ಸಾಲಿನ ಆಯವ್ಯಯ ಘೋಷಣೆಯ ಕಂಡಿಕೆ (205)ರಲ್ಲಿ ಈ ಕೆಳಕಂಡಂತೆ ಘೋಷಿಸಲಾಗಿದೆ.

"ಮಾನ್ಯತೆ ಪಡೆದ ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ತಾಂತ್ರಿಕ/ವೈದ್ಯಕೀಯ/ದಂತ ವೈದ್ಯಕೀಯ, ಇತ್ಯಾದಿ ಕೋರ್ಸುಗಳಿಗೆ CET, COMED-K, Deemed Universities ಮೂಲಕ ಆಯ್ಕೆಯಾಗಿ ದಾಖಲಾಗುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಮೆಟ್ರಿಕ್ ನಂತರದ ವಿದ್ಯಾರ್ಥಿಗಳ ಪೋಷಕರ ವಾರ್ಷಿಕ ಆದಾಯ 2.50 ಲಕ್ಷ ರೂ.ವರೆಗೆ ಇರುವವರಿಗೆ ಶೇ:100 ರಷ್ಟು ಹಾಗೂ 2.50 ಲಕ್ಷ ರೂ.ಗಳಿಂದ 10.00 ಲಕ್ಷ ರೂ.ಗಳವರೆಗೆ ಇರುವವರಿಗೆ ಶೇ:50 ರಷ್ಟು ಶುಲ್ಕವನ್ನು ಮರುಪಾವತಿಸಲಾಗುವುದು".

ಈ ಮೇಲ್ಕಂಡ ಘೋಷಣೆಯನ್ನು ಅನುಷ್ಠಾನಗೊಳಿಸಲು ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ರವರು ಪ್ರಸ್ತಾವನೆ ಸಲ್ಲಿಸಿರುತ್ತಾರೆ. ಸದರಿ ಪ್ರಸ್ತಾವನೆಗಳನ್ನು ಪರಿಶೀಲಿಸಿ, ಸರ್ಕಾರ ಈ ಕೆಳಕಂಡ ಆದೇಶ ಹೊರಡಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಕಇ 178 ಪಕವಿ 2015, ಬೆಂಗಳೂರು, ದಿನಾಂಕ : 31.12.2015**

ಪ್ರಸ್ತಾವನೆಯಲ್ಲಿ ವಿವರಿಸಿದಂತೆ, ಮೆಟ್ರಿಕ್ ನಂತರದ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಈ ಕೆಳಕಂಡ ಅರ್ಹತೆ ಮತ್ತು ಷರತ್ತುಗಳಿಗೆ ಒಳಪಟ್ಟು ಶುಲ್ಕ ಮಂಜೂರಾತಿ / ಮರು ಪಾವತಿ ಮಾಡಲು ಆದೇಶಿಸಿದೆ.

**I. ಶುಲ್ಕ ಮಂಜೂರಾತಿ/ಮರು ಪಾವತಿ ಪಡೆಯಲು ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ಇರಬೇಕಾದ ಅರ್ಹತೆ.**

1. ಭಾರತದ ಪ್ರಜೆಯಾಗಿದ್ದು, ಅರ್ಜಿ ಸಲ್ಲಿಸುವ ದಿನಾಂಕಕ್ಕೆ ಕನಿಷ್ಠ 7 ವರ್ಷ ಕರ್ನಾಟಕದಲ್ಲಿ ವ್ಯಾಸಂಗ ಮಾಡಿರತಕ್ಕದ್ದು, ಮತ್ತು ಕರ್ನಾಟಕ ರಾಜ್ಯದ ಖಾಯಂ ವಾಸಿಯಾಗಿರಬೇಕು. ಕರ್ನಾಟಕ ರಾಜ್ಯದ ತಹಶೀಲ್ದಾರ್‌ರವರಿಂದ ನೀಡಲ್ಪಡುವ ನಮೂನೆ-ಡಿ ಯಲ್ಲಿ ಜಾತಿ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು.
2. ಕರ್ನಾಟಕ ಶಾಸನಬದ್ಧ ವಿಶ್ವವಿದ್ಯಾಲಯಗಳ/ಪಿಯು ಬೋರ್ಡ್ ಅಧಿನಿಯಕ್ಕೆ ಒಳಪಡುವ ಸರ್ಕಾರಿ/ಸ್ಥಳೀಯ ಸಂಸ್ಥೆ/ಖಾಸಗಿ ಅನುದಾನಿತ/ಮಾನ್ಯತೆ ಪಡೆದ ಖಾಸಗಿ ಅನುದಾನ ರಹಿತ ಶಿಕ್ಷಣ ಸಂಸ್ಥೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮೆಟ್ರಿಕ್ ನಂತರದ ವಿದ್ಯಾರ್ಥಿಗಳು ಅರ್ಹರಿರುತ್ತಾರೆ.
3. ವಿದ್ಯಾರ್ಥಿಗಳು ಹಿಂದಿನ ವರ್ಷದ ಪಬ್ಲಿಕ್ ಪರೀಕ್ಷೆಯಲ್ಲಿ ಎಲ್ಲಾ ವಿಷಯಗಳಲ್ಲಿ ಉತ್ತೀರ್ಣರಾಗದಿದ್ದಲ್ಲಿ ಮುಂದಿನ ವರ್ಷದಲ್ಲಿ ಶುಲ್ಕ ಮಂಜೂರಾತಿ / ಮರುಪಾವತಿಗೆ ಅರ್ಹರಿರುವುದಿಲ್ಲ. ಆದರೆ ಈ ಕೋರ್ಸುಗಳಲ್ಲಿ ಕ್ಯಾರಿ ಓವರ್ ಪದ್ಧತಿ ಜಾರಿಯಲ್ಲಿದ್ದು, ಮುಂದಿನ ತರಗತಿಗೆ / ವರ್ಷಕ್ಕೆ ಪ್ರವೇಶಕ್ಕೆ ಅವಕಾಶವಿದ್ದಲ್ಲಿ ಅಂತಹವರು ಶುಲ್ಕ ಮಂಜೂರಾತಿ / ಮರುಪಾವತಿಗೆ ಅರ್ಹರಿರುತ್ತಾರೆ.

--2)

ಸರ್ಕಾರದ ಅಧೀನ ಕಾರ್ಯದರ್ಶಿ
ಸಮಾಜ ಕಲ್ಯಾಣ ಇಲಾಖೆ

...a fine day, and look upon verdure is the most perfect refreshment. – Jane Austen

Scanned with OKEN Scanner

4. ಯಾವ ಸರ್ಕಾರಿ / ಖಾಸಗಿ ಸಂಸ್ಥೆಗಳಲ್ಲಿ ಉಚಿತ ಶಿಕ್ಷಣ ನೀಡಲಾಗುತ್ತಿದೆಯೋ (ಯಾವ ಸಂಸ್ಥೆಗಳಲ್ಲಿ ವಿದ್ಯಾರ್ಥಿಗಳಿಂದ ಶುಲ್ಕಗಳನ್ನು ವಸೂಲು ಮಾಡುವುದಿಲ್ಲವೊ) ಅಂತಹ ಸಂಸ್ಥೆಗಳು ಮತ್ತು ಅಲ್ಲಿನ ವಿದ್ಯಾರ್ಥಿಗಳು ಶುಲ್ಕ ಮಂಜೂರಾತಿ / ಮರುಪಾವತಿಗೆ ಅರ್ಹರಿರುವುದಿಲ್ಲ.
5. ಪರೀಕ್ಷಾ ಶುಲ್ಕವನ್ನು ವರ್ಷಕ್ಕೊಮ್ಮೆ ಮರು ಪಾವತಿಸಲಾಗುವುದು. ಅನುತ್ತೀರ್ಣರಾದ ಅಭ್ಯರ್ಥಿಗಳು ಹಾಗೂ ಸಪ್ಲಿಮೆಂಟರಿ ಪರೀಕ್ಷೆ ತೆಗೆದುಕೊಳ್ಳುವವರು ಪರೀಕ್ಷಾ ಶುಲ್ಕ ಮಂಜೂರಾತಿ / ಮರು ಪಾವತಿಗೆ ಅರ್ಹರಲ್ಲ.
6. ಬೇರೆ ಯಾವುದೇ ಸರ್ಕಾರ ಮತ್ತು ಸರ್ಕಾರೇತರ ಮೂಲಗಳಿಂದ ಈಗಾಗಲೇ ಶುಲ್ಕ ಮರುಪಾವತಿ ಪಡೆದಿದ್ದಲ್ಲಿ ಅಂತಹವರು ಪುನಃ ಈ ಯೋಜನೆಯಡಿ ಶುಲ್ಕ ಮಂಜೂರಾತಿ / ಮರುಪಾವತಿಗೆ ಅರ್ಹರಿರುವುದಿಲ್ಲ.
7. ಡೊನೇಷನ್ ಸೀಟುಗಳ ಕೋಟಾದಡಿಯಲ್ಲಿ ಪ್ರವೇಶ ಪಡೆದವರು ಶುಲ್ಕ ಮಂಜೂರಾತಿ / ಮರುಪಾವತಿಗೆ ಅರ್ಹರಿರುವುದಿಲ್ಲ.
8. ಕರ್ನಾಟಕ ರಾಜ್ಯದಲ್ಲಿ ಖಾಯಂ ವಾಸಿಯಾಗಿದ್ದ ವಿದ್ಯಾರ್ಥಿಗಳು ಹೊರ ರಾಜ್ಯದಲ್ಲಿ ಶಾಸನಬದ್ಧವಾಗಿ ಮಾನ್ಯತೆ ಪಡೆದ ವಿಶ್ವವಿದ್ಯಾಲಯಗಳ ಅಧೀನಕ್ಕೆ ಒಳಪಡುವ ಸರ್ಕಾರಿ / ಸ್ಥಳೀಯ ಸಂಸ್ಥೆ / ಖಾಸಗಿ ಅನುದಾನಿತ /ಮಾನ್ಯತೆ ಪಡೆದ ಖಾಸಗಿ ಅನುದಾನರಹಿತ ಶಿಕ್ಷಣ ಸಂಸ್ಥೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮೆಟ್ರಿಕ್ ನಂತರದ ವಿದ್ಯಾರ್ಥಿಗಳು ಅರ್ಹರಿರುತ್ತಾರೆ. ಆದರೆ ಅಂತಹವರಿಗೆ ಕರ್ನಾಟಕ ರಾಜ್ಯದಲ್ಲಿ ಆಯಾ ಕೋರ್ಸುಗಳಲ್ಲಿ ನಿಗದಿಪಡಿಸಿದ ಶುಲ್ಕ ಅಥವಾ ವಾಸ್ತವವಾಗಿ ಪಾವತಿಸಿದ ಶುಲ್ಕ ಅದರಲ್ಲಿ ಯಾವುದು ಕಡಿಮೆಯೋ ಅದನ್ನು ಮಾತ್ರ ಮಂಜೂರಾತಿ / ಮರುಪಾವತಿಸಲಾಗುವುದು. (ಈ ಶುಲ್ಕ ಮರುಪಾವತಿ ಪಡೆಯಲು ವಾರ್ಷಿಕ ಆದಾಯ ರೂ.2.50 ಲಕ್ಷಗಳ ಒಳಗೆ ಇರುವವರು ಮಾತ್ರ ಅರ್ಹರು)
9. ಕುಟುಂಬ ವಾರ್ಷಿಕ ವರಮಾನ/ಆದಾಯ:
ಎ) ಕುಟುಂಬದ ವಾರ್ಷಿಕ ವರಮಾನ ಎಲ್ಲಾ ಮೂಲಗಳಿಂದ ರೂ.2.50 ಲಕ್ಷಗಳ ಮಿತಿಯೊಳಗಿರತಕ್ಕದ್ದು. ಅಂತಹ ವಿದ್ಯಾರ್ಥಿಗಳು ಪೂರ್ಣ (ಶೇ:100 ರಷ್ಟು) ಶುಲ್ಕ ಮಂಜೂರಾತಿಗೆ ಅರ್ಹರಿರುತ್ತಾರೆ.
ಬಿ) ಆದರೆ ಕುಟುಂಬದ ವಾರ್ಷಿಕ ವರಮಾನ ಎಲ್ಲಾ ಮೂಲಗಳಿಂದ ರೂ.2.50 ಲಕ್ಷಗಳಿಂದ ರೂ.10.00 ಲಕ್ಷಗಳ ಮಿತಿಯೊಳಗಿದ್ದಲ್ಲಿ, ಇಂತಹ ವಿದ್ಯಾರ್ಥಿಗಳು, ನಿಗದಿಪಡಿಸಿದ ಒಟ್ಟು ಶುಲ್ಕದಲ್ಲಿ ಶೇ:50 ರಷ್ಟು ಮರುಪಾವತಿಗೆ ಅರ್ಹರಿರುತ್ತಾರೆ.

II. ಮಂಜೂರಾತಿ/ಮರು ಪಾವತಿಸಬೇಕಾದ ಶುಲ್ಕಗಳು

| ಕುಟುಂಬ ವಾರ್ಷಿಕ ವರಮಾನ ರೂ.2.50 ಲಕ್ಷದೊಳಗಿರುವ ಮೆಟ್ರಿಕ್ ನಂತರದ ವಿದ್ಯಾರ್ಥಿಗಳು | ಕುಟುಂಬ ವಾರ್ಷಿಕ ವರಮಾನ ರೂ.2.50 ರಿಂದ ರೂ.10.00 ಲಕ್ಷಗಳ ಮಿತಿಯೊಳಗಿರುವ ಮೆಟ್ರಿಕ್ ನಂತರದ ವಿದ್ಯಾರ್ಥಿಗಳು |
|---|---|
| 1.ಪರೀಕ್ಷಾ ಶುಲ್ಕ | 1.ಪರೀಕ್ಷಾ ಶುಲ್ಕ |
| 2. ಪ್ರವೇಶ/ನೋಂದಣಿ ಶುಲ್ಕ | 2. ಪ್ರವೇಶ/ನೋಂದಣಿ ಶುಲ್ಕ |
| 3.ಬೋಧನಾ ಶುಲ್ಕ | 3. ಬೋಧನಾ ಶುಲ್ಕ |
| 4.ಪ್ರಯೋಗಾಲಯ ಶುಲ್ಕ (ವಿಜ್ಞಾನ/ ವೈದ್ಯಕೀಯ/ ತಾಂತ್ರಿಕ ಕೋರ್ಸುಗಳಿಗೆ) | 4. ಇತರೆ ಕಡ್ಡಾಯ ಶುಲ್ಕಗಳು ಗರಿಷ್ಠ ರೂ.500/- ಅಥವಾ ವಾಸ್ತವ ಶುಲ್ಕ ಯಾವುದು ಕಡಿಮೆಯೋ ಅದು. |
| 5. ಕ್ರೀಡಾ ಶುಲ್ಕ | - |
| 6. ಗ್ರಂಥಾಲಯ ಶುಲ್ಕ | - |
| 7. ವೈದ್ಯಕೀಯ ಪರೀಕ್ಷಾ ಶುಲ್ಕ | - |
| 8. ಇತರೆ ಕಡ್ಡಾಯ ಶುಲ್ಕಗಳು ಗರಿಷ್ಠ ರೂ.500/- ಅಥವಾ ವಾಸ್ತವ ಶುಲ್ಕ ಯಾವುದು ಕಡಿಮೆಯೋ ಅದು. | - |

ಸರ್ಕಾರದ ಅಧೀನ ಕಾರ್ಯದರ್ಶಿ,
ಸಮಾಜ ಕಲ್ಯಾಣ ಇಲಾಖೆ

...ure is the most perfect refreshment. – Jane Austen
A good plan implemented tod
Scanned with OKEN Scanner

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯದ ವಿಶ್ವವಿದ್ಯಾಲಯಗಳಲ್ಲಿ / ಶಿಕ್ಷಣ ಸಂಸ್ಥೆಗಳಲ್ಲಿ ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳಿಗೆ ಪ್ರವೇಶಾತಿ ಸಮಯದಲ್ಲಿ ಶುಲ್ಕಗಳನ್ನು ಪಡೆಯದಿರುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 372 ಯುನ್‌ಇ 2012, ದಿನಾಂಕ:14-09-2012
2. ಸರ್ಕಾರದ ಆದೇಶ ಸಂಖ್ಯೆ:ಸಕಇ 83 ಪಕವಿ 2013, ದಿನಾಂಕ:27-06-2013.
3. ಸರ್ಕಾರದ ಸುತ್ತೋಲೆ ಸಂಖ್ಯೆ: ಸಕಇ 167 ಪಕವಿ 2020, ದಿನಾಂಕ:12-11-2020.
4. ಸರ್ಕಾರದ ಆದೇಶ ಸಂಖ್ಯೆ:SWD/EDU/ED3/91/2023 (Com: 1098854), ದಿನಾಂಕ:03-07-2023.
5. ನಿರ್ದೇಶಕರು, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ ಇವರ ಏಕ ಕಡತ ಪ್ರಸ್ತಾವನೆ ಸಂಖ್ಯೆ:STWD-EDN 0EDN4/ 6/2023, (Com: 1123299).
6. ಉನ್ನತ ಶಿಕ್ಷಣ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಇಡಿ 253 ಟಿಇಸಿ 2023, ದಿನಾಂಕ:24.08.2023.

*****

ಮೆಟ್ರಿಕ್ ನಂತರದ ವಿವಿಧ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಹಾಗೂ ಕುಟುಂಬದ ವಾರ್ಷಿಕ ಆದಾಯ ರೂ.2.50 ಲಕ್ಷ ಒಳಗಿರುವ ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳಿಗೆ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮದಡಿ ವಿದ್ಯಾರ್ಥಿ ವೇತನ ಮಂಜೂರು ಮಾಡಲಾಗುತ್ತಿದೆ. ಸರ್ಕಾರ ಆಯಾಯ ಕೋರ್ಸಿಗೆ ನಿಗದಿಮಾಡಿರುವ ಕಾಲೇಜು ಶುಲ್ಕವನ್ನು ಮಾರುಪಾವತಿ ಮಾಡಲಾಗುತ್ತಿದೆ ಹಾಗೂ ಸದರಿ ಮೊತ್ತವನ್ನು ವಿದ್ಯಾರ್ಥಿಯು ತನ್ನ ಖಾತೆಗೆ ಜಮೆಯಾದ ನಂತರದಲ್ಲಿ ಸಂಬಂಧಪಟ್ಟ ಕಾಲೇಜಿಗೆ ಪಾವತಿಸಲು ಸೂಚಿಸಲಾಗಿರುತ್ತದೆ.

ಈ ಹಿನ್ನಲೆಯಲ್ಲಿ, ರಾಜ್ಯದ ವಿವಿಧ ವಿಶ್ವವಿದ್ಯಾಲಯಗಳಲ್ಲಿ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಸ್ನಾತಕ / ಸ್ನಾತಕೋತ್ತರ / ಡಿಪ್ಲೋಮೋ / ಪಾಲಿಟೆಕ್ನಿಕ್ / ವೃತ್ತಿಪರ ಕೋರ್ಸ್ – ವೈದ್ಯಕೀಯ, ಇಂಜನಿಯರಿಂಗ್, ಹಾಗೂ allied Courses ಗಳಿಗೆ ಪ್ರವೇಶ ಪಡೆಯುವ ಸಂದರ್ಭದಲ್ಲಿ ಯಾವುದೇ ಶುಲ್ಕವನ್ನು ಸ್ಥಳದಲ್ಲಿಯೇ ಪಾವತಿ ಮಾಡುವಂತೆ ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರು / ವಿಶ್ವವಿದ್ಯಾಲಯದ ಮುಖ್ಯಸ್ಥರು ಒತ್ತಾಯ ಮಾಡಬಾರದೆಂದು ಈಗಾಗಲೇ ಮೇಲೆ ಕ್ರಮಾಂಕ (1)ರಲ್ಲಿ ಓದಲಾದ ಉನ್ನತ ಶಿಕ್ಷಣ ಇಲಾಖೆಯ ಸುತ್ತೋಲೆ ಹಾಗೂ ಕ್ರಮಾಂಕ (2) ಮತ್ತು (3)

ರಲ್ಲಿ ಓದಲಾದ ಸಮಾಜ ಕಲ್ಯಾಣ ಇಲಾಖೆಯ ಸುತ್ತೋಲೆ ಮತ್ತು ಆದೇಶಗಳನ್ನು ಹೊರಡಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4) ರ ಆದೇಶ ಸಂಖ್ಯೆ: SWD/EDU/ED3/91/2023, (Com:1098854), ದಿನಾಂಕ:03-07-2023 ರಲ್ಲಿ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ದಾಖಲಾತಿ ಸಮಯದಲ್ಲಿ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನಕ್ಕೆ ಅರ್ಹತೆ ಪಡೆದಿರುವ ವಿದ್ಯಾರ್ಥಿಯಿಂದ ಯಾವುದೇ ಶುಲ್ಕ ಪಾವತಿ ಮಾಡುವಂತೆ ಒತ್ತಾಯ ಮಾಡಬಾರದೆಂದು ಆದೇಶ ಹೊರಡಿಸಲಾಗಿದೆ.

ಮುಂದುವರೆದು, ಭಾರತ ಸರ್ಕಾರದ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಮಾರ್ಗಸೂಚಿ (2020-21 ರಿಂದ 2025-26 ರ ವರೆಗೆ) ಯ ಕಂಡಿಕೆ 8 ರಲ್ಲಿ Freeship Card ಬಗ್ಗೆ ವಿವರವಾದ ಮಾರ್ಗಸೂಚಿಗಳನ್ನು ಹೊರಡಿಸಲಾಗಿರುತ್ತದೆ.

| | |
|---|---|
| 8.1 | All eligible students shall be entitled to take admission in the institutions without pre-payment of Tuition Fees and hostel fees as per the Scheme Guidelines. To enable this, a FREESHIP CARD will be issued by the State Government to the eligible students, as per the procedure.......... |

ಅದರಂತೆ, SSP ತಂತ್ರಾಂಶದಲ್ಲಿ, ಸದರಿ FREESHIP CARD ಗೆ ಅವಕಾಶ ಮಾಡಿಕೊಡಲಾಗಿದೆ ಹಾಗೂ ಅರ್ಹ ವಿದ್ಯಾರ್ಥಿಗಳು ಸದರಿ ಕಾರ್ಡಿನ ಮೂಲಕ ಯಾವುದೇ ಭೋದನಾ ಶುಲ್ಕ ಹಾಗೂ ಕಡ್ಡಾಯ ಶುಲ್ಕಗಳನ್ನು ಪಾವತಿಸದೇ ಎಲ್ಲಾ ಶಿಕ್ಷಣ ಸಂಸ್ಥೆಗಳಲ್ಲಿ ಪ್ರವೇಶ ಪಡೆಯಬಹುದಾಗಿದೆ.

ಶುಲ್ಕ ಮರುಪಾವತಿಗೆ ಸಂಬಂಧಿಸಿದಂತೆ, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಗೆ ಈ ಕೆಳಕಂಡಂತೆ ದೂರುಗಳು ವಿದ್ಯಾರ್ಥಿಗಳಿಂದ ಸ್ವೀಕೃತವಾಗಿರುವ ಕುರಿತು ಮೇಲೆ ಓದಲಾದ ಕ್ರಮ ಸಂಖ್ಯೆ:(5)ರ ನಿರ್ದೇಶಕರು, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ ಇವರು ಏಕ ಕಡತ ಪ್ರಸ್ತಾವನೆಯಲ್ಲಿ ಕೆಳಗಿನಂತೆ ವಿವರಿಸಿರುತ್ತಾರೆ.

1. ವಿದ್ಯಾರ್ಥಿಗಳಿಂದ ದಾಖಲಾತಿ ಸಮಯದಲ್ಲಿ ಶುಲ್ಕ ಪಾವತಿ ಮಾಡುವಂತೆ ಕಾಲೇಜುಗಳಲ್ಲಿ ಒತ್ತಾಯ ಮಾಡುತ್ತಿರುವುದು.

2. 2022-23ನೇ ಸಾಲಿನಿಂದ UUCMS ಮುಖಾಂತರ ದಾಖಲಾತಿ ನಡೆಯುತ್ತಿದ್ದು, ವಿದ್ಯಾರ್ಥಿಯು ಶುಲ್ಕ ಪಾವತಿಸದ ಹೊರತು University register Number ಬರುವುದಿಲ್ಲ. University register Number ಬರದೇ ಇದ್ದರೆ, SSP ರವರು ವಿದ್ಯಾರ್ಥಿಗೆ ವಿದ್ಯಾರ್ಥಿ ವೇತನಕ್ಕೆ ಅರ್ಜಿಯನ್ನು ಹಾಕಲು ಅವಕಾಶ ಇರುವುದಿಲ್ಲ. ಇದರಿಂದ ವಿದ್ಯಾರ್ಥಿಗಳು ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನದಿಂದ ವಂಚಿತರಾಗುತ್ತಿದ್ದಾರೆ.

3. ವಿದ್ಯಾರ್ಥಿಗಳು ಸರ್ಕಾರಿ ಕೋಟಾ/SNQ ಕೋಟಾದಡಿ ಆಯ್ಕೆಯಾಗಿದ್ದರೂ ಸಹ, ಹೆಚ್ಚುವರಿ ಶುಲ್ಕಗಳನ್ನು ವಿದ್ಯಾರ್ಥಿಗಳಿಂದ ವಸೂಲು ಮಾಡುತ್ತಿರುವ ಬಗ್ಗೆ. (ಉದಾ. ಇಂಜಿನಿಯರಿಂಗ್ ಕೋರ್ಸಿಗೆ ಸಂಬಂಧಿಸಿದಂತೆ ವಿದ್ಯಾರ್ಥಿಯು SNQ ಕೋಟಾದಡಿ ಆಯ್ಕೆಯಾಗಿದ್ದರೂ ಸಹ ಸುಮಾರು ರೂ.50,000 ಗಳಿಂದ 1.00 ಲಕ್ಷ ಶುಲ್ಕ ಪಾವತಿಸುವಂತೆ ಒತ್ತಾಯ ಮಾಡುತ್ತಿರುವುದು.

4. ವೃತ್ತಿಪರ ಕೋರ್ಸುಗಳ ಸಂಬಂಧ SSP ರವರು University Register Number ಅನ್ನು ಕಡ್ಡಾಯ ಮಾಡಿದ್ದು, ಇದರಿಂದಾಗಿ ವಿದ್ಯಾರ್ಥಿಗಳಿಗೆ ಸಕಾಲದಲ್ಲಿ ಅರ್ಜಿ ಸಲ್ಲಿಸಲು ಸಾಧ್ಯವಾಗದೇ ಇರುವುದರಿಂದಲೂ ಹಾಗೂ ಇದರಿಂದಾಗಿ ಸಕಾಲದಲ್ಲಿ ಸಂಸ್ಥೆಗೆ ಶುಲ್ಕ ಪಾವತಿ ಮಾಡಲು ಸಾಧ್ಯವಾಗದೇ ಇರುವುದರಿಂದ, ವೃತ್ತಿಪರ ಶಿಕ್ಷಣ ಸಂಸ್ಥೆಗಳು ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳಿಗೆ ದಾಖಲಾದ ಕೂಡಲೇ ಅಗಾಧ ಮೊತ್ತವನ್ನು ಶುಲ್ಕವನ್ನಾಗಿ ಪಾವತಿಸುವಂತೆ ಒತ್ತಾಯ ಮಾಡುತ್ತಿರುವುದು.

ಅಲ್ಲದೇ, ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆಯ ಸುತ್ತೋಲೆ ಸಂಖ್ಯೆ: ಕಾಶಿಇ/ಶೈವಿ/06/ಪದಿ ಶುಲ್ಕ/2022-23, ದಿನಾಂಕ:23.06.2022 ರ ಷರತ್ತುಗಳ ಕ್ರಮ ಸಂಖ್ಯೆ: 7 ರಲ್ಲಿ ಈ ಕೆಳಗಿನಂತೆ ಷರತ್ತನ್ನು ವಿಧಿಸಿರುವುದರಿಂದ ವಿದ್ಯಾರ್ಥಿ ವೇತನಕ್ಕೆ ಅರ್ಹತೆ ಪಡೆದಿರುವ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಇದರಿಂದ ತೀವ್ರ ಸಂಕಷ್ಟಕ್ಕೆ ಸಿಲುಕಿದಂತಾಗಿದೆ.

| | |
|---|---|
| 7 | ವಿವಿಧ ಇಲಾಖೆಗಳಿಂದ ವಿದ್ಯಾರ್ಥಿಗಳಿಗೆ ಮಂಜೂರು ಮಾಡಲಾಗುವ ವಿದ್ಯಾರ್ಥಿ ವೇತನ ಮೊತ್ತದಲ್ಲಿ ವಿನಾಯಿತಿ ನೀಡಿರುವ ಶುಲ್ಕಗಳನ್ನು ಕಡ್ಡಾಯವಾಗಿ ಪಾವತಿಸಿಕೊಂಡು ಉಳಿಕೆ ಮೊತ್ತವನ್ನು ವಿದ್ಯಾರ್ಥಿಗಳಿಗೆ ಹಿಂಪಾವತಿಸಲು ಸೂಚಿಸಲಾಗಿದೆ. |

ಈ ಎಲ್ಲಾ ಅಂಶಗಳ ಹಿನ್ನೆಲೆಯಲ್ಲಿ, 2023-24ನೇ ಸಾಲಿನಿಂದ ಜಾರಿಗೆ ಬರುವಂತೆ ಕುಟುಂಬದ ವಾರ್ಷಿಕ ಆದಾಯ ರೂ.2.50 ಲಕ್ಷ ಒಳಗಿರುವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನಕ್ಕೆ ಅರ್ಹತೆ ಪಡೆದಿರುವ ಪರಿಶಿಷ್ಟ ಪಂಗಡ ವಿದ್ಯಾರ್ಥಿಯಿಂದ ದಾಖಲಾತಿ ಸಮಯದಲ್ಲಿ ಯಾವುದೇ ಕಡ್ಡಾಯ ಶುಲ್ಕಗಳನ್ನು (ಮರುಪಾವತಿ ಮಾಡಲಾಗುವ /Deposit ಗಳನ್ನು ಹೊರತುಪಡಿಸಿ) ಪಾವತಿ ಮಾಡಿಸಿಕೊಳ್ಳದೇ ಉಚಿತವಾಗಿ ಪ್ರವೇಶ ಕಲ್ಪಿಸುವ ನಿಟ್ಟಿನಲ್ಲಿ ವಿದ್ಯಾರ್ಥಿಗಳಿಂದ ಯಾವುದೇ ಶುಲ್ಕ ಪಾವತಿ ಮಾಡುವಂತೆ ಒತ್ತಾಯ ಮಾಡಬಾರದೆಂದು ಆದೇಶ

ಹೊರಡಿಸುವಂತೆ ನಿರ್ದೇಶಕರು, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ ಇವರು ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (6) ರಲ್ಲಿ ಉನ್ನತ ಶಿಕ್ಷಣ ಇಲಾಖೆಯು ರಾಜ್ಯದ ವಿಶ್ವವಿದ್ಯಾಲಯ/ ಶಿಕ್ಷಣ ಸಂಸ್ಥೆಗಳಲ್ಲಿ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಪ್ರವೇಶಾತಿ ಸಮಯದಲ್ಲಿ ಶುಲ್ಕವನ್ನು ಪಡೆಯದಂತೆ ಸುತ್ತೋಲೆ ಹೊರಡಿಸಲು ಸಹಮತಿ ನೀಡಿರುತ್ತದೆ.

ಮೇಲಿನ ಪ್ರಸ್ತಾವನೆಯನ್ನು ಸರ್ಕಾರವು ಪರಿಶೀಲಿಸಿ, ಸಮಾಜ ಕಲ್ಯಾಣ ಇಲಾಖೆಯ ಮಾದರಿಯಲ್ಲಿ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ದಾಖಲಾತಿ ಸಮಯದಲ್ಲಿ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನಕ್ಕೆ ಅರ್ಹತೆ ಪಡೆದಿರುವ ವಿದ್ಯಾರ್ಥಿಯಿಂದ ಯಾವುದೇ ಶುಲ್ಕ ಪಾವತಿ ಮಾಡುವಂತೆ ಒತ್ತಾಯ ಮಾಡಬಾರದೆಂದು ಆದೇಶ ಹೊರಡಿಸಲು ನಿರ್ಧರಿಸಿ, ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಸಕಇ-ಎಸ್‌ಟಿಪಿ/108/2023,**
**ದಿನಾಂಕ:25-08-2023.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನಕ್ಕೆ ಸಂಬಂಧಿಸಿದಂತೆ ವಿದ್ಯಾಸಂಸ್ಥೆ/ ಕಾಲೇಜುಗಳು ಈ ಅಂಶಗಳನ್ನು ಕಡ್ಡಾಯವಾಗಿ ಪಾಲಿಸುವಂತೆ ಆದೇಶಿಸಿದೆ.

1. ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಕಾರ್ಯಕ್ರಮದಡಿ ಮಂಜೂರಾಗುವ ಶುಲ್ಕದ ಮೊತ್ತವನ್ನು ವಿದ್ಯಾರ್ಥಿಯು ಇತರೆ ಯಾವುದೇ ವಿಷಯಗಳಿಗೆ ಖರ್ಚು ಭರಿಸದೇ, ಕಡ್ಡಾಯವಾಗಿ ಕಾಲೇಜಿಗೆ ಪಾವತಿ ಮಾಡಬೇಕಾಗಿರುತ್ತದೆ (ನಿರ್ವಹಣಾ ವೆಚ್ಚ ಹೊರತುಪಡಿಸಿ). ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯು DBT ಮೂಲಕ ವಿದ್ಯಾರ್ಥಿ/ ವಿದ್ಯಾರ್ಥಿನಿಯರಿಗೆ ಪಾವತಿಸಿದ ಬಗ್ಗೆ ಮಾಹಿತಿಯನ್ನು ಖಚಿತ ಪಡಿಸಿಕೊಂಡು ನಂತರ ವಿದ್ಯಾರ್ಥಿ / ವಿದ್ಯಾರ್ಥಿನಿಯಿಂದ ಸದರಿ ಮೊತ್ತವನ್ನು ಪಾವತಿ ಮಾಡಿಸಿಕೊಳ್ಳುವುದು.
2. ಪರಿಶಿಷ್ಟ ಪಂಗಡದ ವಿದ್ಯಾರ್ಥಿ/ ವಿದ್ಯಾರ್ಥಿನಿಯರ ಶೈಕ್ಷಣಿಕ ಹಿತದೃಷ್ಠಿ ಹಾಗೂ ಉನ್ನತ ಶಿಕ್ಷಣದಲ್ಲಿ ವಂಚಿತರಾಗಬಾರದೆಂಬ ಉದ್ದೇಶದಿಂದ ಪ್ರವೇಶಾತಿ ಸಮಯದಲ್ಲಿ ಕಡ್ಡಾಯ ಶುಲ್ಕಗಳನ್ನು ಪಾವತಿಸುವಂತೆ ಒತ್ತಾಯ ಮಾಡುವಂತಿಲ್ಲ.
3. ಕೋರ್ಸುವಾರು ನಿಗದಿಯಾಗಿರುವ ಶುಲ್ಕದ ವಿವರಗಳನ್ನು ಸಂಬಂಧಪಟ್ಟ ಇಲಾಖೆ/ ವಿಶ್ವವಿದ್ಯಾಲಯ/ ಮಂಡಳಿಗಳು ನೇರವಾಗಿ ರಾಜ್ಯ ವಿದ್ಯಾರ್ಥಿ ವೇತನ ಪೋರ್ಟಲ್ ತಂತ್ರಾಂಶದಲ್ಲಿ ನಮೂದು ಮಾಡಲಾಗುತ್ತಿದ್ದು, ಈ ಕೆಳಕಂಡ ಶುಲ್ಕಗಳನ್ನು ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಕಾರ್ಯಕ್ರಮದಡಿ ಮಂಜೂರು ಮಾಡಲಾಗುತ್ತಿದೆ.

| Sl No | Fee Components |
|---|---|

| | |
|---|---|
| 1 | Application Fee |
| 2 | Lab Fee |
| 3 | Library Fee |
| 4 | Sports Fee |
| 5 | Study Room Fee |
| 6 | Tuition Fee |
| 7 | Transfer Certificate Fee |
| 8 | Study Certificate Fee |
| 9 | Magazine Calendar Fee |
| 10 | Medical Examination Fee |
| 11 | Union Fee |
| 12 | ID Card Fee |
| 13 | Exam Fee |
| 14 | Lab Exam Fee |
| 15 | Registration Fee |
| 16 | Sports Development Fee |
| 17 | OMR Fee |
| 18 | Marks card Fee |
| 19 | Admission Fee |
| 20 | Student Welfare Fund |
| 21 | Teachers Benefit Fund |
| 22 | Bharat Scouts Guides Rover Ranger Fee |
| 23 | Indian Red Cross Organization Fee |
| 24 | NSS Fee |
| 25 | Development Fee (Only for Govt Colleges) |

4. ಕೌನ್ಸಿಲಿಂಗ್ ಸೀಟುಗಳಿಗೆ ಸಂಬಂಧಿಸಿದಂತೆ, ಸರ್ಕಾರಿ ಕೋಟಾ ಸೀಟುಗಳಿಗೆ ವಿಶ್ವವಿದ್ಯಾಲಯ ಹಾಗೂ KEA ನಿಗದಿಪಡಿಸಿದ ಶುಲ್ಕಗಳನ್ನು ವಿದ್ಯಾರ್ಥಿ ವೇತನ ಕಾರ್ಯಕ್ರಮದಡಿ ಮಂಜೂರು ಮಾಡಲು ಕ್ರಮವಹಿಸಲಾಗಿದ್ದು, ಸರ್ಕಾರಿ ಕೋಟಾ ಸೀಟಿನಲ್ಲಿ ಆಯ್ಕೆಯಾದ ವಿದ್ಯಾರ್ಥಿ / ವಿದ್ಯಾರ್ಥಿನಿಯರಿಂದ ಇತರೆ ಯಾವುದೇ ಶುಲ್ಕಗಳನ್ನು ವಸೂಲು ಮಾಡುವಂತಿಲ್ಲ.
5. ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಕಾರ್ಯಕ್ರಮದಡಿ ಮೇಲ್ಕಂಡ **Fee Components ಗಳನ್ನು ಮಾತ್ರ ಮಂಜೂರು ಮಾಡಲಾಗುತ್ತಿದ್ದು**, ಇಲಾಖೆ/ ಮಂಡಳಿ /ವಿಶ್ವವಿದ್ಯಾಲಯಗಳು ಕೋರ್ಸ್‌ವಾರು ನಿಗದಿಯಾದ ಶುಲ್ಕದ ವಿವರಗಳನ್ನು ಕಡ್ಡಾಯವಾಗಿ ನಿಗದಿತ ಅವಧಿಯೊಳಗೆ ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶದಲ್ಲಿ ನಮೂದಿಸುವುದು. ಒಮ್ಮೆ ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಯಿಂದ ಅನುಮೋದನೆಯಾದ ಶುಲ್ಕದ ವಿವರಗಳನ್ನು ಯಾವುದೇ ಹಂತದಲ್ಲಿಯೂ ಬದಲಾವಣೆ ಮಾಡಲು ಸಾಧ್ಯವಿರುವುದಿಲ್ಲ. ಆದ್ದರಿಂದ, ಸಂಬಂಧಪಟ್ಟ ಇಲಾಖೆ/ಮಂಡಳಿ/ವಿಶ್ವವಿದ್ಯಾಲಯಗಳು ಕಡ್ಡಾಯವಾಗಿ **Fee Components** ಪರಿಶೀಲಿಸಿ ನಮೂದು ಮಾಡುವುದು. ಒಂದು ವೇಳೆ ಶುಲ್ಕಗಳು

ಕಡಿಮೆ ಮಂಜೂರಾದಲ್ಲಿ, ಸಂಬಂಧಪಟ್ಟ ಇಲಾಖೆ/ ಮಂಡಳಿ/ ವಿಶ್ವವಿದ್ಯಾಲಯಗಳೇ ನೇರ ಹೊಣೆಗಾರರನ್ನಾಗಿ ಮಾಡುವುದು.

6. ವಿದ್ಯಾರ್ಥಿ/ ವಿದ್ಯಾರ್ಥಿನಿಯು ಆಯಾಯ ಕೋರ್ಸಿಗೆ ದಾಖಲಾದ ದಿನದಂದೇ ವಿದ್ಯಾರ್ಥಿಗೆ University Reg Number ಅನ್ನು ನೀಡುವುದು ಹಾಗೂ ದಾಖಲಾದ ದಿನದಂದೇ ವಿದ್ಯಾರ್ಥಿ/ ವಿದ್ಯಾರ್ಥಿನಿಯು ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸಲು ಅವಕಾಶ ಮಾಡಿಕೊಡುವುದು.
7. ವಿದ್ಯಾರ್ಥಿ ವೇತನಕ್ಕೆ ಅರ್ಹತೆ ಪಡೆದಿರುವ ವಿದ್ಯಾರ್ಥಿ/ ವಿದ್ಯಾರ್ಥಿನಿಯರಿಂದ ಯಾವುದೇ ಕಡ್ಡಾಯ ಶುಲ್ಕ ಪಡೆಯದೇ UUCMS ನಲ್ಲಿ ದಾಖಲು ಮಾಡಿಕೊಳ್ಳುವುದು ಹಾಗೂ ಅಂದೇ UUCMS ಸಂಖ್ಯೆಯನ್ನು ವಿದ್ಯಾರ್ಥಿ / ವಿದ್ಯಾರ್ಥಿನಿಗೆ ವಿತರಿಸುವುದು.
8. ಅದೇ ರೀತಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ದಾಖಲಾಗುತ್ತಿರುವ ವಿದ್ಯಾರ್ಥಿ/ ವಿದ್ಯಾರ್ಥಿನಿಯರಿಗೂ ಸಹ ದಾಖಲಾದ ದಿನದಂದೇ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸಲು ಅವಕಾಶ ಮಾಡಿಕೊಡುವುದು.
9. ಇಲಾಖಾ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿಶ್ವವಿದ್ಯಾಲಯಗಳ ಸಂಬಂಧ (ಉದಾ. Karnataka Law University, etc) ಗಳ ಸಂಬಂಧ E Attestation ಮೂಲಕ ದಾಖಲಾತಿ ದಿನದಂದೇ ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಲು ಅವಕಾಶ ಮಾಡಿಕೊಡುವುದು.
10. ಭಾರತ ಸರ್ಕಾರದ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಮಾರ್ಗಸೂಚಿಯಲ್ಲಿ ಉಲ್ಲೇಖಿಸಿರುವಂತೆ, Freeship Card ಅನ್ನು ಮಾನ್ಯ ಮಾಡುವುದು ಎಲ್ಲಾ ಕಾಲೇಜುಗಳ ಜವಾಬ್ದಾರಿಯಾಗಿರುತ್ತದೆ. Freeship Card ನಲ್ಲಿ ವಿದ್ಯಾರ್ಥಿ/ ವಿದ್ಯಾರ್ಥಿನಿಯು ಸಲ್ಲಿಸಿರುವ ದೃಢೀಕರಣದಂತೆ ವಿದ್ಯಾರ್ಥಿ/ ವಿದ್ಯಾರ್ಥಿನಿಗೆ ವಿದ್ಯಾರ್ಥಿ ವೇತನ ಮೊತ್ತ ಪಾವತಿಯಾದ ನಂತರದಲ್ಲಿ ವಿದ್ಯಾರ್ಥಿಯಿಂದ ಕಡ್ಡಾಯವಾಗಿ ಭರಿಸಿಕೊಳ್ಳುವುದು. ಒಂದು ವೇಳೆ ವಿದ್ಯಾರ್ಥಿ / ವಿದ್ಯಾರ್ಥಿನಿಯು ತನ್ನ ಖಾತೆಗೆ ವಿದ್ಯಾರ್ಥಿ ವೇತನ ಮೊತ್ತ ಜಮೆಯಾದ ನಂತರದಲ್ಲೂ ಕಾಲೇಜಿಗೆ ಶುಲ್ಕವನ್ನು ಮರುಪಾವತಿ ಮಾಡದೇ ಇದ್ದಲ್ಲಿ, ಅಂತಹ ವಿದ್ಯಾರ್ಥಿ/ ವಿದ್ಯಾರ್ಥಿನಿಗೆ ವಿದ್ಯಾರ್ಥಿ ವೇತನ ಜಮೆ ಆಗಿರುವ ಬಗ್ಗೆ ದೃಢೀಕರಿಸಿಕೊಂಡು ಅಂತಹ ವಿದ್ಯಾರ್ಥಿ/ ವಿದ್ಯಾರ್ಥಿನಿಯ ವಿರುದ್ಧ ಸಂಬಂಧಪಟ್ಟ ಕಾಲೇಜು ಸೂಕ್ತ ಕ್ರಮ ತೆಗೆದುಕೊಳ್ಳುವುದು.
11. SSP ತಂತ್ರಾಂಶವನ್ನು ನಿರ್ವಹಣೆ ಮಾಡುತ್ತಿರುವ ಕಾರ್ಯಕ್ರಮ ನಿರ್ದೇಶಕರು, SSP ರವರೂ ಸದರಿ ಎಲ್ಲಾ ಮೆಟ್ರಿಕ್ ನಂತರದ ಕೋರ್ಸುಗಳ ಸಂಬಂಧ ಯಾವುದೇ ರೀತಿಯ Bonafide Data ಗೆ ನಿರೀಕ್ಷಿಸದೇ ಹಾಗೂ ವಿದ್ಯಾರ್ಥಿ/ ವಿದ್ಯಾರ್ಥಿನಿಯರುಗಳಿಗೆ University Register Number ಒತ್ತಾಯ ಮಾಡದೇ ಕಡ್ಡಾಯವಾಗಿ ವಿದ್ಯಾರ್ಥಿ ವೇತನಕ್ಕೆ ಅರ್ಜಿಯನ್ನು ದಾಖಲಾದ ದಿನದಂದೇ ಪಡೆದು, ಅದೇ ದಿನ ಅರ್ಜಿ ಸಲ್ಲಿಸಲು ವಿದ್ಯಾರ್ಥಿ/ ವಿದ್ಯಾರ್ಥಿನಿಗೆ ಅವಕಾಶ ಮಾಡಿಕೊಡುವುದು ಹಾಗೂ ವಿದ್ಯಾರ್ಥಿ/ ವಿದ್ಯಾರ್ಥಿನಿ ಅರ್ಜಿ ಸಲ್ಲಿಸಿದ ದಿನದಂದೇ ಸಂಬಂಧಪಟ್ಟ ಇಲಾಖೆಗೆ ವಿದ್ಯಾರ್ಥಿ ವೇತನ ಮಂಜೂರು ಮಾಡಲು ಅವಕಾಶ ಮಾಡಿಕೊಡುವುದು. ಯಾವುದೇ ವಿಳಂಬಕ್ಕೆ ಹಾಗೂ ತಾಂತ್ರಿಕ ದೋಷಗಳಿಗೆ ಆಸ್ಪದ ನೀಡುವಂತಿಲ್ಲ.
12. ಖಾಸಗಿ ಕಾಲೇಜುಗಳಲ್ಲಿ ದಾಖಲಾದ ದಿನದಂದೇ ಬೋಧನಾ ಶುಲ್ಕ ಪಾವತಿ ಮಾಡಲು ಒತ್ತಾಯ ಮಾಡುತ್ತಿರುವ ಬಗ್ಗೆ ದೂರುಗಳು ಸಲ್ಲಿಕೆಯಾಗಿರುತ್ತದೆ.

ಅಲ್ಲದೇ, ವಿದ್ಯಾರ್ಥಿ ವೇತನ ಮೊತ್ತ ನೇರವಾಗಿ ವಿದ್ಯಾರ್ಥಿ / ವಿದ್ಯಾರ್ಥಿನಿಗೆ ಪಾವತಿಯಾಗುತ್ತಿರುವುದರಿಂದಲೂ ಹಾಗೂ ವೈದ್ಯಕೀಯ ಶಿಕ್ಷಣ ದುಬಾರಿಯಾಗಿರುವುದರಿಂದಲೂ ಕಾಲೇಜುಗಳು ಆರಂಭದಲ್ಲಿಯೇ ಶುಲ್ಕ ಪಾವತಿಸಲು ಒತ್ತಾಯ ಮಾಡುತ್ತಿರುತ್ತವೆ. ಮುಂದುವರೆದು, SSP ತಾಂತ್ರಿಕ ದೋಷ ಹಾಗೂ University Reg No ಕೋರಿಕೆಯಿಂದಾಗಿ ವಿದ್ಯಾರ್ಥಿ/ ವಿದ್ಯಾರ್ಥಿನಿಯರುಗಳು ಸಕಾಲದಲ್ಲಿ ಅರ್ಜಿ ಸಲ್ಲಿಸಲು ತೊಂದರೆಯಾಗುತ್ತಿದೆ. SSP ರವರ ಈ ಕ್ರಮದಿಂದಾಗಿ, ವಿದ್ಯಾರ್ಥಿಗಳ ಶೈಕ್ಷಣಿಕ ಸಾಲಿನಲ್ಲಿಯೇ ಅವರ ವಿದ್ಯಾರ್ಥಿ ವೇತನ ದೊರೆಯುವುದು ಕಷ್ಟಸಾಧ್ಯವಾಗಿದೆ. ಈ ಹಿನ್ನೆಲೆಯಲ್ಲಿ, ಆಯಾಯ ಕಾಲೇಜುಗಳಿಗೆ Attestation ಮುಖಾಂತರ ವಿದ್ಯಾರ್ಥಿಗಳ ಪರಿಶೀಲನೆಗೆ ಕಡ್ಡಾಯವಾಗಿ ಅವಕಾಶ ಮಾಡಿಕೊಡುವುದು SSP ಜವಾಬ್ದಾರಿಯಾಗಿರುತ್ತದೆ.

13. ಒಂದು ವೇಳೆ ಮೇಲ್ಕಂಡ ಮಾರ್ಗಸೂಚಿಗಳನ್ನು ಉಲ್ಲಂಘಿಸಿ, ದಾಖಲಾತಿ ಸಮಯಲ್ಲಿ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನಕ್ಕೆ ಅರ್ಹತೆ ಪಡೆದಿರುವ ಪರಿಶಿಷ್ಟ ಪಂಗಡದ ವಿದ್ಯಾರ್ಥಿ/ ವಿದ್ಯಾರ್ಥಿನಿಯಿಂದ ಕಡ್ಡಾಯವಾಗಿ ಶುಲ್ಕ ಪಾವತಿ ಮಾಡುವಂತೆ ಒತ್ತಾಯ ಮಾಡಬಾರದೆಂದು ವಿದ್ಯಾಸಂಸ್ಥೆಗಳಿಗೆ ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಶಿವಲಿಂಗಪ್ರಭು ವಾಲಿ )
ಸರ್ಕಾರದ ಉಪ ಕಾರ್ಯದರ್ಶಿ-2 (ಪ್ರ),
ಸಮಾಜ ಕಲ್ಯಾಣ ಇಲಾಖೆ.

**ಇವರಿಗೆ :-**

1) ಮಹಾಲೇಖಪಾಲರು, (ಲೆಕ್ಕ ಪತ್ರ: ಲೆಕ್ಕಪರಿಶೋಧನೆ), ಪಾರ್ಕ್ ರಸ್ತೆ, ಬೆಂಗಳೂರು.
2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ, ತಾಂತ್ರಿಕ ಶಿಕ್ಷಣ) ಬಹುಮಹಡಿಗಳ ಕಟ್ಟಡ, ಬೆಂಗಳೂರು.
3) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
4) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಾನೂನು ಇಲಾಖೆ, ವಿಧಾನಸೌಧ, ಬೆಂಗಳೂರು.
5) ಸರ್ಕಾರದ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ (ಇ-ಆಡಳಿತ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
6) ಎಲ್ಲಾ ವಿಶ್ವವಿದ್ಯಾಲಯಗಳ ಕುಲಪತಿಗಳು (ಉನ್ನತ ಶಿಕ್ಷಣ ಇಲಾಖೆಯ ಮುಖಾಂತರ)
7) ನಿರ್ದೇಶಕರು, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ, ಬೆಂಗಳೂರು.
8) ಆಯುಕ್ತರು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬೆಂಗಳೂರು.
9) ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
10) ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.

11)ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇಲಾಖೆ, ಬೆಂಗಳೂರು.
12) ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಇ ಆಡಳಿತ ಕೇಂದ್ರ, ಸಿಆಸು ಇಲಾಖೆ, (ಇ-ಆಡಳಿತ), ಬೆಂಗಳೂರು.
13)ಕಾರ್ಯಕ್ರಮ ನಿರ್ದೇಶಕರು, SSP, ಬೆಂಗಳೂರು.
14)ಎಲ್ಲಾ ಜಿಲ್ಲೆಗಳ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ/ ಯೋಜನಾ ಸಮನ್ವಯಾಧಿಕಾರಿ, ಸಮಗ್ರ ಗಿರಿಜನ ಅಭಿವೃದ್ಧಿ ಯೋಜನೆ, ಪರಿಶಿಷ್ಟ ಪಂಗಡಗಳ ಇಲಾಖೆ (ನಿರ್ದೇಶಕರು, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ, ಬೆಂಗಳೂರು ಇವರ ಮುಖಾಂತರ)
15)ಎಲ್ಲಾ ಜಿಲ್ಲೆಗಳ ಉಪ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, (ಆಯುಕ್ತರು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬೆಂಗಳೂರು ಇವರ ಮುಖಾಂತರ)
16)ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**ಪ್ರತಿ :**

1. ಮಾನ್ಯ ಪರಿಶಿಷ್ಟ ಪಂಗಡಗಳ ಕಲ್ಯಾಣ, ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರ ಆಪ್ತ ಕಾರ್ಯದರ್ಶಿಯವರು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸ ಸೌಧ.
3. ಸರ್ಕಾರದ ಉಪ ಕಾರ್ಯದರ್ಶಿ-1 ರವರ ಆಪ್ತ ಸಹಾಯಕರು, ಸಮಾಜ ಕಲ್ಯಾಣ ಇಲಾಖೆ.

****